**ಇಂದು ದಿಃ 07.03.2026 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**<u>ಪಾಟೀ ಸವಾಲುಃ ಎದುರುದಾರರ ಪರ ಶ್ರೀ.ಎಂ.ಜೆ.ಎಸ್. ವಕೀಲರಿಂದಃ</u>**

ದಿನಾಂಕ 24.03.2023 ರಂದು ಅಪಘಾತವಾಗಿದೆ. ಆ ದಿನ ನಾನು ಪಂಚವಳ್ಳಿಯಿಂದ ನನ್ನ ಜಮೀನಿನ ಕಡೆ ಹೋಗುತ್ತಿದ್ದೆ. ಬೈಕ್ ಓಡಿಸಲು ನನಗೆ ಚಾಲನಾ ಪರವಾನಗಿ ಇದೆ. ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ, ಕಳೆದುಹೋಗಿದೆ. ಅಪಘಾತವಾದ ಕೂಡಲೇ ಹುಣಸೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ನಂತರ ಮೈಸೂರಿನ ಕಾಮಾಕ್ಷಿ ಆಸ್ಪತ್ರೆಯಲ್ಲಿ ದಾಖಲಾಗಿದ್ದೇನೆ. ಅಪಘಾತದ ಬಗ್ಗೆ ನನ್ನ ಮಗ ಪೊಲೀಸ್ ಠಾಣೆಗೆ ದೂರು ನೀಡಿದ್ದಾನೆ. ಯಾವ ದಿನ ದೂರು ಕೊಟ್ಟಿದ್ದಾನೆ ಎಂದು ಗೊತ್ತಿಲ್ಲ. ಸುಮಾರು 20 ದಿವಸ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದೇನೆ. ಆ ಬಗ್ಗೆ ಡಿಸ್ಚಾರ್ಜ್ ಸಮರಿಯನ್ನು ನ್ಯಾಯಾಲಯಕ್ಕೆ ಕೊಟ್ಟಿದ್ದೇನೆ. ಅಂತಹ ದಾಖಲೆಯನ್ನು ನ್ಯಾಯಾಲಯಕ್ಕೆ ಕೊಟ್ಟಿಲ್ಲ ಎಂದರೆ ಸರಿಯಲ್ಲ.

ನನ್ನ ವಾಹನದ ಬಲಭಾಗಕ್ಕೆ ಜಕ್ಕಂ ಆಗಿತ್ತು. ಅಪಘಾತವಾದ ಸಮಯದಲ್ಲಿ ಕತ್ತಲಾಗಿತ್ತು ಎಂದರೆ ಸರಿಯಲ್ಲ, ಬೆಳಕಿತ್ತು. ಕತ್ತಲಾಗಿದ್ದ ಕಾರಣ ಯಾವ ವಾಹನದಿಂದ ಅಪಘಾತವಾಗಿದೆ ಎಂದು ನಿಖರವಾಗಿ ಗೊತ್ತಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ 11 ದಿವಸದ ನಂತರ ದೂರು ಕೊಟ್ಟಿದ್ದೇವೆ ಎಂದರೆ ಸರಿ. ಬೇರೆ ಯಾವುದೋ ಒಂದು ವಾಹನವನ್ನು ಅಪಘಾತ ಮಾಡಿರುವಂತೆ ಬಿಂಬಿಸಲು ತಡವಾಗಿ ದೂರು ಕೊಟ್ಟಿದ್ದೇನೆ ಎಂದರೆ ಸುಳ್ಳು. ಎದುರುದಾರರ ವಾಹನ ನನಗೆ ಅಪಘಾತ ಮಾಡಿಲ್ಲದಿದ್ದರೂ ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ದೂರು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

ಅಪಘಾತದ ಸಮಯದಲ್ಲಿ ನಾನು ವ್ಯವಸಾಯ ಮತ್ತು ತಂಬಾಕು ಮಂಡಳಿಯಲ್ಲಿ ತಂಬಾಕು ವಿಂಗಡಣೆ ಕೆಲಸ ಮಾಡುತ್ತಿದ್ದೆ ಎಂದು ತೋರಿಸಲು ದಾಖಲೆ ಹಾಜರುಪಡಿಸಿಲ್ಲ. ಖಾಸಗಿ ಕಂಪನಿಯಾಗಿರುವುದರಿಂದ ಆ ದಾಖಲೆ ಕೊಡಲು ಸಾಧ್ಯವಿಲ್ಲ. ನನ್ನ ಆದಾಯದ ಬಗ್ಗೆ ನ್ಯಾಯಾಲಯಕ್ಕೆ ದಾಖಲೆ ಕೊಟ್ಟಿಲ್ಲ. ಈಗ ನಾನು ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಕಳೆದ ಒಂದು ವಾರದ ಹಿಂದೆ ವೈದ್ಯರ ಬಳಿ ಹೋಗಿ ತೋರಿಸಿಕೊಂಡು ಬಂದಿದ್ದೇನೆ. ಆ ಬಗ್ಗೆ ದಾಖಲೆ ಹಾಜರುಪಡಿಸಲು ತೊಂದರೆ ಇಲ್ಲ. ನನ್ನ ಚಿಕಿತ್ಸೆಯ ಸಲುವಾಗಿ ರೈತರಿಂದ ಸಾಲ ಮಾಡಿದ್ದೇನೆ. ಈಗ ನಾನು ತಂಬಾಕು ಮಂಡಳಿಯಲ್ಲಿ ಕೆಲಸ ಮಾಡುತ್ತಿಲ್ಲ. ಈಗ ನನಗೆ ವಾಹನ ಚಾಲನೆ ಮಾಡಲು ಸಾಧ್ಯವಾಗುತ್ತಿಲ್ಲ. ನಾನೇ ಮನೆಯ ಹತ್ತಿರ ಬಿದ್ದು ಗಾಯ ಮಾಡಿಕೊಂಡು ಎದುರುದಾರರ ವಿರುದ್ಧ ದೂರು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

ನನಗೆ ಮದ್ಯಪಾನ ಮಾಡುವ ಅಭ್ಯಾಸ ಇದೆ ಎಂದರೆ ಸರಿಯಲ್ಲ. ಎದುರುದಾರರ ವಾಹನದಿಂದ ಯಾವುದೇ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ಮೆಡಿಕಲ್ ಬಿಲ್ಲುಗಳನ್ನು ಪರಿಹಾರ ಪಡೆಯುವ ಉದ್ದೇಶದಿಂದ ಸೃಷ್ಟಿ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನನಗೆ ಈಗ 65 ವರ್ಷ ವಯಸ್ಸಾಗಿದೆ. ನನ್ನ ಅರ್ಜಿಯಲ್ಲಿ 57 ವರ್ಷ ವಯಸ್ಸಾಗಿದೆ ಎಂದು ಸುಳ್ಳು ಬರೆಸಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

***(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)***

***ಓ.ಹೆ.ಕೆ.ಸರಿ ಇದೆ.***

**ಹಿ.ಸಿ.ನ್ಯಾ ಮತ್ತು ಪ್ರ.ದ.ನ್ಯಾದಂ.**

**ಪಿರಿಯಾಪಟ್ಟಣ**